57

**ವಿಧಾನ ಪರಿಷತ್ ಸದಸ್ಯರಾದ ಶ್ರೀ ಗೋವಿಂದರಾಜು ರವರಿಂದ ನಿಯಮ 72 ರ ಅಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.**

**ಪ್ರಶ್ನೆ:** ರಾಜ್ಯದಲ್ಲಿ ಕಲುಷಿತ ನೀರು ಸೇವನೆಯಿಂದ ಜನರು ನರಳುತ್ತಿರುವ ಘಟನೆಗಳು ಹೆಚ್ಚುತ್ತಿದೆ. ತುಮಕೂರು ಜಿಲ್ಲೆಯಲ್ಲಿ ಕಲುಷಿತ ನೀರು ಸೇವನೆಯಿಂದ 108 ಮಂದಿ ಅಸ್ವಸ್ಥ, 3 ವರ್ಷದ ಮಗು ಸೇರಿ 6 ಮಂದಿ ಸಾವು, ಕೋಲಾರದಲ್ಲಿ ಕಲುಷಿತ ನೀರು ಸೇವನೆಯಿಂದ ಹಿರಿಯ ನಾಗರಿಕ ಸಾವು ಹಲವು ಮಂದಿ ಅಸ್ವಸ್ಥ ಮೈಸೂರು ಜಿಲ್ಲೆಯಲ್ಲೂ ಕಲುಷಿತ ನೀರು ಸೇವನೆಯಿಂದ ಹಲವು ಜನರು ಅಸ್ವಸ್ಥ. ಇದಲ್ಲದೆ ಅತ್ಯಂತ ಆತಂಕದ ವಿಷಯವೆಂದರೆ, ಹಲವು ನದಿಗಳು, ಹಳ್ಳ-ಕೊಳ್ಳಗಳು ಹುಟ್ಟಿ ಹರಿಯುವ ಮಲೆನಾಡಿನ ನೀರಿನ ಮೂಲ ಕೂಡಾ ಮಲಿನಗೊಂಡಿವೆ. ಮಲೆನಾಡು ಜಿಲ್ಲೆಗಳೆಂದೇ ಪ್ರಸಿದ್ಧವಾದ ಶಿವಮೊಗ್ಗ ಚಿಕ್ಕಮಗಳೂರು ಜಿಲ್ಲೆಗಳ ನೀರಿನಲ್ಲೂ ಫ್ಲೋರೈಡ್ ಸಮಸ್ಯೆ ಇದೆ ಎಂದು ಕೇಂದ್ರ ಸರ್ಕಾರದ ಜಲಶಕ್ತಿ ಸಚಿವಾಲಯದ ವರದಿ ಹೇಳಿದೆ. ಈ ವಿಷಯ ಗಂಭೀರವಾದ ವಿಷಯವಾಗಿರುವುದರಿಂದ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:**

ರಾಜ್ಯದ ತುಮಕೂರು, ಮೈಸೂರು ಮತ್ತು ಕೋಲಾರ ಜಿಲ್ಲೆಯಲ್ಲಿ ಕಲುಷಿತ ನೀರು ಸೇವನೆಯಿಂದ ಸಾರ್ವಜನಿಕರು ಅಸ್ವಸ್ಥರಾಗಿದ್ದು, ಸಾವು-ನೋವುಗಳು ಕಂಡು ಬಂದಿರುವುದಾಗಿ ವರದಿಯಾಗಿರುತ್ತದೆ.

ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ ಮಿಡಿಗೇಶಿ ಹೋಬಳಿಯ ಚಿನ್ನೇನಹಳ್ಳಿ ಗ್ರಾಮದಲ್ಲಿ ದಿನಾಂಕ: 09.06.2024 ರಂದು ಕಲುಷಿತ ನೀರಿನ ಸೇವನೆಯಿಂದ 108 ಜನರು ಅಸ್ವಸ್ಥರಾಗಿದ್ದು, ಅದರಲ್ಲಿ ತುಮಕೂರು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆಯ ವರದಿಯಂತೆ ಮೂವರು ಮರಣ ಹೊಂದಿರುತ್ತಾರೆ. ಉಳಿದವರು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗಿರುತ್ತಾರೆ. ಸದರಿ ಗ್ರಾಮದಲ್ಲಿ ಜಾತ್ರಾ ಮಹೋತ್ಸವವಿದ್ದುದರಿಂದ ಅಕ್ಕಪಕ್ಕದ ಊರುಗಳಿಂದ ಸಾರ್ವಜನಿಕರು ಹಾಗೂ ಭಕ್ತಾಧಿಗಳು ಹಾಗೂ ಬಂಧು ಬಾಂಧವರು ಸೇರಿದ್ದರಿಂದ ಅಸ್ವಸ್ಥರಾಗಿರುವ ಸಂಖ್ಯೆ ಹೆಚ್ಚಾಗಿರುತ್ತದೆ.

ಕೋಲಾರ ಜಿಲ್ಲೆಯ ಮುಳಬಾಗಿಲು ತಾಲ್ಲುಕಿನ ಊರುಕುಂಟೆ ಮಿಟ್ಟೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಮಿಣಜೇನಹಳ್ಳಿ ಗ್ರಾಮದ ನೀರು ಸರಬರಾಜು ಪೈಪ್ ಲೈನ್ ಒಡೆದು ಚರಂಡಿ ನೀರು ಸೇರಿರುವುದರಿಂದ ವಾಂತಿ ಭೇದಿ ಪ್ರಕರಣಗಳು ಕಂಡು ಬಂದಿದ್ದು, 07 ಜನ ಅಸ್ವಸ್ಥರಾಗಿದ್ದು ಇದರಲ್ಲಿ 06 ಜನರು ವಿವಿಧ ಆಸ್ಪತ್ರೆಗಳಲಲ್ಲಿ ಚೇತರಿಸಿಕೊಂಡು ಬಿಡುಗಡೆಯಾಗಿದ್ದು, ವೈದ್ಯಾಧಿಕಾರಿಗಳ ವರದಿಯ ಪ್ರಕಾರ ಶ್ರೀ ವೆಂಕಟಪ್ಪ ವಯಸ್ಸು 70 ಇವರು ಅನೇಕ ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದರಿಂದ ಹಾಗೂ ವಯೋಸಹಜದಿಂದ ಮರಣ ಹೊಂದಿರುವುದಾಗಿ ತಿಳಿಸಿರುತ್ತಾರೆ.

ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ತಗಡೂರು ಗ್ರಾಮದಲ್ಲಿ 43 ಜನ ಹಾಗೂ ಹುಣಸೂರು ತಾಲ್ಲೂಕಿನ ಕಡೆಮನುಗನಹಳ್ಳಿ ಗ್ರಾಮದಲ್ಲಿ 33 ಜನ ಅಸ್ವಸ್ಥರಾಗಿದ್ದು ಗುಣಮುಖರಾಗಿರುತ್ತಾರೆ.

ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನಲ್ಲಿ 05 ಗ್ರಾಮಗಳಲ್ಲಿ, ಅಜ್ಜಂಪುರ ತಾಲ್ಲೂಕಿನ 01 ಗ್ರಾಮದಲ್ಲಿ ಹಾಗೂ ಚಿಕ್ಕಮಗಳೂರು ತಾಲ್ಲೂಕಿನ 03 ಗ್ರಾಮಗಳು ಸೇರಿದಂತೆ ಒಟ್ಟು 10 ಕೊಳವೆಬಾವಿಗಳ ನೀರಿನಲ್ಲಿ ಫ್ಲೋರೈಡ್ ಅಂಶವು ಕಂಡು ಬಂದಿದ್ದು, ಪರ್ಯಾಯವಾಗಿ ಈ ಎಲ್ಲಾ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಿ, ನೀರನ್ನು ಪೂರೈಸಲಾಗುತ್ತಿದೆ.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು